**All India Radio: Bangalore**
**National Bulletin In Kannada**
**15.11.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.11.2025  1.10 p.m.**

**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಗುಜರಾತ್ ಭೇಟಿ; ಸೂರತ್‌ನಲ್ಲಿ ಮುಂಬೈ-ಅಹಮದಾಬಾದ್ ಅತಿ ವೇಗದ ರೈಲ್ವೆ ಕಾರಿಡಾರ್ ಪರಿಶೀಲನೆ
2. ಜನ್‌ಜಾತಿಯ ಗೌರವ ದಿವಸ್; ರಾಷ್ಟ್ರಪತಿ, ಉಪರಾಷ್ಟ್ರಪತಿ, ಲೋಕಸಭಾಧ್ಯಕ್ಷರಿಂದ ಭಗವಾನ್ ಬಿರ್ಸಾ ಮುಂಡಾ ಅವರಿಗೆ ಪುಷ್ಪನಮನ
3. ಜಮ್ಮು-ಕಾಶ್ಮೀರದ ನೌಗಾಮ್ ಪೊಲೀಸ್ ಠಾಣೆಯಲ್ಲಿ ಸ್ಫೋಟ; ೯ ಮಂದಿ ಸಾವು
4. ಟೆಸ್ಟ್ ಕ್ರಿಕೆಟ್; ಮೊದಲ ಪಂದ್ಯದ ಎರಡನೇ ದಿನದಾಟದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಮುನ್ನಡೆ ಸಾಧಿಸಿದ ಭಾರತ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ಗೆ ಒಂದು ದಿನದ ಭೇಟಿ ಕೈಗೊಂಡಿದ್ದು, ಮುಂಬೈ-ಅಹಮದಾಬಾದ್ ಅತಿ ವೇಗದ ರೈಲು ಕಾರಿಡಾರ್‌ನ ಪ್ರಗತಿ ಪರಿಶೀಲನೆ ನಡೆಸಲು ಸೂರತ್‌ನಲ್ಲಿ ನಿರ್ಮಾಣ ಹಂತದಲ್ಲಿರುವ ಬುಲೆಟ್ ರೈಲು ನಿಲ್ದಾಣಕ್ಕೆ ಭೇಟಿ ನೀಡಿದರು. ಈ ವೇಳೆ ಅವರು, ಅಧಿಕಾರಿಗಳೊಂದಿಗೆ ಸಂವಾದ ನಡೆಸಿ, ಕಾಮಗಾರಿ ಪರಿಶೀಲನೆ ನಡೆಸಿದರು. ಈ ಕಾರಿಡಾರ್ ಭಾರತದ ಮಹತ್ವಾಕಾಂಕ್ಷಿ ಮೂಲಸೌಕರ್ಯ ಯೋಜನೆಗಳಲ್ಲಿ ಒಂದಾಗಿದ್ದು, ಗುಜರಾತ್, ದಾದ್ರಾ ಮತ್ತು ನಗರ್ ಹವೇಲಿಯಲ್ಲಿ ಸುಮಾರು ೩೫೨ ಕಿಲೋಮೀಟರ್ ಹಾಗೂ ಮಹಾರಾಷ್ಟ್ರದ ೧೫೬ ಕಿಲೋಮೀಟರ್ ಪ್ರದೇಶದಲ್ಲಿ ವ್ಯಾಪಿಸಿದೆ. ಈ ಕಾರಿಡಾರ್, ಸಬರಮತಿ, ಅಹಮದಾಬಾದ್, ಆನಂದ್, ವಡೋದರಾ, ಬರೂಚ್, ಸೂರತ್, ಥಾಣೆ, ಮುಂಬೈ ಸೇರಿದಂತೆ ಹಲವು ಪ್ರಮುಖ ನಗರಗಳಿಗೆ ಸಂಪರ್ಕ ಒದಗಿಸಲಿದೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ, ನರ್ಮದಾ ಜಿಲ್ಲೆಯ ದೇಡಿಯಾಪದದಲ್ಲಿ ಜನಜಾತಿಯ ಗೌರವ್ ದಿವಸ್ ಅಂಗವಾಗಿ ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬುಡಕಟ್ಟು ಸಮುದಾಯಗಳನ್ನು ಉನ್ನತೀಕರಿಸುವ ಮತ್ತು ಪ್ರದೇಶದ

ಗ್ರಾಮೀಣ ಮತ್ತು ದೂರದ ಪ್ರದೇಶಗಳಲ್ಲಿ ಮೂಲಸೌಕರ್ಯವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ೯ ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ಮೂಲಸೌಕರ್ಯ, ಆರೋಗ್ಯ, ಶಿಕ್ಷಣ ಮತ್ತು ಪರಂಪರೆಯ ಮೇಲೆ ಕೇಂದ್ರೀಕರಿಸುತ್ತವೆ ಮತ್ತು ಬುಡಕಟ್ಟು ಸಬಲೀಕರಣಕ್ಕೆ ಒತ್ತು ನೀಡುತ್ತವೆ. ಪ್ರಧಾನ ಮಂತ್ರಿ ಜನಜಾತಿಯ ಆದಿವಾಸಿ ನ್ಯಾಯ ಮಹಾ ಅಭಿಯಾನ - ಪಿಎಂ-ಜನ್‌ಮನ್ ಮತ್ತು ಧರ್ತಿ ಆಬಾ ಜನಜಾತಿಯ ಗ್ರಾಮ ಉತ್ಕರ್ಷ್ ಅಭಿಯಾನ ಅಡಿಯಲ್ಲಿ ನಿರ್ಮಿಸಲಾದ ಒಂದು ಲಕ್ಷ ಮನೆಗಳ ಗೃಹ ಪ್ರವೇಶ ಕಾರ್ಯಕ್ರಮದಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ. ಬುಡಕಟ್ಟು ಪ್ರದೇಶಗಳಲ್ಲಿ ಸಂಪರ್ಕವನ್ನು ಹೆಚ್ಚಿಸಲು ೭೪೮ ಕಿಲೋಮೀಟರ್ ಹೊಸ ರಸ್ತೆಗಳು ಮತ್ತು ಸಮುದಾಯ ಕೇಂದ್ರಗಳಾಗಿ ಕಾರ್ಯನಿರ್ವಹಿಸಲು ಗ್ರಾಮ ಉತ್ಕರ್ಷ್ ಅಭಿಯಾನ ದಡಿಯಲ್ಲಿ ಪ್ರಧಾನಿ, ೧೪ ಬುಡಕಟ್ಟು ಬಹು-ಮಾರುಕಟ್ಟೆ ಕೇಂದ್ರಗಳ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><><><>

ಸ್ವಾತಂತ್ರ್ಯ ಹೋರಾಟಗಾರ ಮತ್ತು ಬುಡಕಟ್ಟು ನಾಯಕ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಇಂದು ದೇಶಾದ್ಯಂತ ಜನ್‌ಜಾತಿಯ ಗೌರವ ದಿವಸ್ ಆಚರಿಸಲಾಗುತ್ತಿದೆ. ಬುಡಕಟ್ಟು ಇತಿಹಾಸವನ್ನು ಜೀವಂತವಾಗಿಡುವ ಮಹತ್ವವನ್ನು ಗುರುತಿಸಿ ಕೇಂದ್ರ ಸರ್ಕಾರ ನವೆಂಬರ್ ೧೫ ಅನ್ನು ಜನಜಾತಿಯ ಗೌರವ ದಿವಸ್ ಎಂದು ಆಚರಿಸುತ್ತಿದೆ. ಈ ಆಚರಣೆಯನ್ನು ಜನಜಾತಿಯ ಗೌರವ ಸಪ್ತಾಹದ ಭಾಗವಾಗಿ ಬುಡಕಟ್ಟು ಸಮುದಾಯದ ಮಹಾನ್ ವ್ಯಕ್ತಿಗಳ ಪರಂಪರೆಯನ್ನು ಮುನ್ನೆಲೆಗೆ ತರುವ ಸಾಂಸ್ಕೃತಿಕ ಕಾರ್ಯಕ್ರಮಗಳು, ಪ್ರದರ್ಶನಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳೊಂದಿಗೆ ಆಚರಿಸಲಾಗುತ್ತಿದೆ. ನವದೆಹಲಿಯ ಸಂಸತ್ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಭಗವಾನ್ ಬಿರ್ಸಾ ಮುಂಡಾ ಅವರಿಗೆ ಪುಷ್ಪನಮನ ಸಲ್ಲಿಸಿದರು. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ, ಭಗವಾನ್ ಬಿರ್ಸಾ ಮುಂಡಾ ಅವರು ಹೊತ್ತಿಸಿದ ರಾಷ್ಟ್ರೀಯತೆಯ ಜ್ವಾಲೆ ಪೀಳಿಗೆಗಳಾದ್ಯಂತ ಉರಿಯುತ್ತಿರಲಿದೆ. ಅವರ ಮತ್ತು ಇತರ ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರ ಪರಂಪರೆ ಸದಾ ಸ್ಮರಣೀಯ ಎಂದಿದ್ದಾರೆ.

ಲೋಕಸಭಾಧ್ಯಕ್ಷ, ರಾಷ್ಟ್ರೀಯ ಹಿತಾಸಕ್ತಿ, ಬುಡಕಟ್ಟು ಏಳಿಗೆಮತ್ತು ಸ್ವಾಭಿಮಾನಕ್ಕಾಗಿ ಬಿರ್ಸಾ ಮುಂಡಾ ಅವರ ಅಸಮಾನ್ಯ ಹೋರಾಟ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದಿದ್ದಾರೆ. ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರಿಗೆ ಮೀಸಲಾಗಿರುವ ವಸ್ತುಸಂಗ್ರಹಾಲಯಗಳು ಮತ್ತು ಸ್ಮಾರಕಗಳ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಒತ್ತು ನೀಡಿದೆ. ಹತ್ತು ರಾಜ್ಯಗಳಲ್ಲಿ ಹನ್ನೊಂದು ವಸ್ತುಸಂಗ್ರಹಾಲಯಗಳಿಗೆ ಅನುಮೋದನೆ ನೀಡಲಾಗಿದೆ. ಇದಲ್ಲದೆ, ರಾಣಿ ಕಮಲಾಪತಿ ರೈಲು ನಿಲ್ದಾಣ, ತಾಂತ್ಯ ಭಿಲ್ ವಿಶ್ವವಿದ್ಯಾಲಯ ಮತ್ತು ಅಲ್ಲೂರಿ ಸೀತಾರಾಮ ರಾಜು ಮತ್ತು ಬಿರ್ಸಾ ಮುಂಡಾ ಅವರ ಪ್ರತಿಮೆಗಳಂತಹ ಸಾರ್ವಜನಿಕ ಸ್ಥಳಗಳು ದೇಶಾದ್ಯಂತ ಬುಡಕಟ್ಟು ಪರಂಪರೆಯನ್ನು ಪ್ರಚುರ ಪಡಿಸುವ ನಿರಂತರ ಪ್ರಯತ್ನವನ್ನು ಪ್ರತಿಬಿಂಬಿಸುತ್ತವೆ.

<><><><>

ಜಮ್ಮು ಕಾಶ್ಮೀರದ ಶ್ರೀನಗರ ಜಿಲ್ಲೆಯ ನೌಗಾಮ್ ಪೊಲೀಸ್ ಠಾಣೆಯಲ್ಲಿ ಸಂಭವಿಸಿದ ಬೃಹತ್ ಆಕಸ್ಮಿಕ ಸ್ಫೋಟದಲ್ಲಿ ೯ ಜನರು ಮೃತಪಟ್ಟಿರುವ ಘಟನೆ ವರದಿಯಾಗಿದೆ. ಮೃತರಲ್ಲಿ ರಾಜ್ಯ ತನಿಖಾ ಸಂಸ್ಥೆಯ ಒಬ್ಬ ಅಧಿಕಾರಿ, ಮೂವರು ವಿಧಿ ವಿಜ್ಞಾನ ಪ್ರಯೋಗಾಲಯದ ತಂಡದ ಸಿಬ್ಬಂದಿ, ಇಬ್ಬರು ಅಪರಾಧ ದೃಶ್ಯ ಛಾಯಾಗ್ರಾಹಕರು, ಇಬ್ಬರು ಆದಾಯ ಇಲಾಖೆ ಅಧಿಕಾರಿಗಳು ಮತ್ತು ಓರ್ವ ದರ್ಜಿ ಸಾವನ್ನಪ್ಪಿದ್ದಾರೆ. ನವದೆಹಲಿಯಲ್ಲಿಂದು ಮಾದ್ಯಮಗಳನ್ನುದ್ದೇಶಿಸಿ ಮಾತನಾಡಿದ ಜಮ್ಮು ಕಾಶ್ಮೀರ ವಿಭಾಗದ ಗೃಹ ವ್ಯವಹಾರಗಳ ಜಂಟಿ ಕಾರ್ಯದರ್ಶಿ ಪ್ರಶಾಂತ್ ಲೋಖಂಡೆ, ಘಟನೆಯಲ್ಲಿ ೨೭ ಪೊಲೀಸ್ ಸಿಬ್ಬಂದಿ, ಇಬ್ಬರು ಆದಾಯ ಇಲಾಖೆ ಅಧಿಕಾರಿಗಳು ಮತ್ತು ಮೂವರು ನಾಗರಿಕರು ಗಾಯಗೊಂಡರು, ಅವರನ್ನು ತಕ್ಷಣ ವೈದ್ಯಕೀಯ ಚಿಕಿತ್ಸೆಗೆ ಒಳಪಡಿಸಲಾಯಿತು. ಈ ದುಃಖದ ಸಮಯದಲ್ಲಿ ಸಂತ್ರಸ್ತ ಎಲ್ಲಾ ಕುಟುಂಬಗಳೊಂದಿಗೆ ಸರ್ಕಾರ ದೃಢವಾಗಿ ನಿಂತಿದೆ ಎಂದರು. ವಶಪಡಿಸಿಕೊಳ್ಳಲಾದ ದೊಡ್ಡ ಪ್ರಮಾಣದ ಸ್ಫೋಟಕ ವಸ್ತುಗಳು ಹಾಗೂ ರಾಸಾಯನಿಕಗಳನ್ನು ಪರಿಶೀಲನೆ ನಡೆಸಿದ ವೇಳೆ ಆಕಸ್ಮಿಕವಾಗಿ ಸ್ಫೋಟ ಸಂಭವಿಸಿದೆ. ಸ್ಫೋಟಕಗಳನ್ನು ಸುರಕ್ಷಿತವಾಗಿ ಪೊಲೀಸ್ ಠಾಣೆಯ ಮುಕ್ತ ಸ್ಥಳದಲ್ಲಿ ಇರಿಸಲಾಗಿತ್ತು. ನಿಗದಿತ ಪ್ರಕ್ರಿಯೆಯಂತೆ ವಿಧಿ ವಿಜ್ಞಾನ ಪರೀಕ್ಷೆಗೆ ಅವುಗಳನ್ನು ಒಳಪಡಿಸಲಾಗುತ್ತಿತ್ತು. ಈ ಸೂಕ್ಷ್ಮ ವಸ್ತುಗಳನ್ನು ಅತ್ಯಂತ ಜಾಗರೂಕತೆಯಿಂದ ನಿರ್ವಹಿಸಲಾಗುತ್ತಿತ್ತು ಎಂದು ಮಾಹಿತಿ ನೀಡಿದ್ದಾರೆ. ಸ್ಫೋಟದಿಂದ ಪೊಲೀಸ್ ಠಾಣಾ ಕಟ್ಟಡ ಸೇರಿದಂತೆ ಸುತ್ತಲಿನ ಕೆಲವು ಕಟ್ಟಡಗಳಿಗೆ

ಹಾನಿಯಾಗಿದೆ. ಘಟನೆಯ ಕಾರಣದ ಕುರಿತು ತನಿಖೆ ನಡೆಸಲಾಗುತ್ತಿದ್ದು, ಈ ಪ್ರಕರಣಕ್ಕೆ ಭಯೋತ್ಪಾದನೆ ಅಥವಾ ಮತ್ತಿತರ ಅರ್ಥ ನೀಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ :  ಪ್ರಶಾಂತ್ ಲೋಖಂಡೆ (೧೬ ಸೆಕೆಂಡ್‌ಗಳು)

<><><><>

ದೆಹಲಿ ಕಾರು ಸ್ಫೋಟಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ ಪೊಲೀಸರೊಂದಿಗೆ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆಯ ಅಧಿಕಾರಿಗಳು ಪಶ್ಚಿಮಬಂಗಾಳದ ಉತ್ತರ-ದಿನಾಜ್‌ಪುರ ಜಿಲ್ಲೆಯ ದಲ್ಖೋಲಾದಿಂದ ಫರಿದಾಬಾದ್‌ನ ಅಲ್-ಫಲಾಹ್ ವಿಶ್ವವಿದ್ಯಾಲಯದ ಎಂಬಿಬಿಎಸ್ ವಿದ್ಯಾರ್ಥಿಯನ್ನು ಬಂಧಿಸಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

<><><><>

ಕೋಲ್ಕೊತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಪ್ರವಾಸಿ ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಎರಡು ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದ ಎರಡನೇ ದಿನದಾಟದಲ್ಲಿಂದು ತನ್ನ ಮೊದಲ ಇನ್ನಿಂಗ್ಸ್ ಮುಂದುವರೆಸಿರುವ ಭಾರತ, ಇತ್ತೀಚಿನ ವರದಿ ಬಂದಾಗ ೮ ವಿಕೆಟ್ ನಷ್ಟಕ್ಕೆ ೧೮೯ ರನ್ ಗಳಿಸಿ ಆಡುತ್ತಿದ್ದು, ೨೦ ರನ್‌ಗಳ ಮುನ್ನಡೆಯಲ್ಲಿದೆ. ನಿನ್ನೆ ದಕ್ಷಿಣ ಆಫ್ರಿಕಾ ತಂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೫೯ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ನಂತರ, ಮೊದಲ ಇನ್ನಿಂಗ್ಸ್ ಅನ್ನು ಆರಂಭಿಸಿದ ಭಾರತ ಮೊದಲ ದಿನದಾಟದ ಅಂತ್ಯದ ವೇಳೆಗೆ ೧ ವಿಕೆಟ್ ನಷ್ಟಕ್ಕೆ ೩೮ ರನ್ ಗಳಿಸಿತ್ತು.

<><><><>

ಉತ್ತರ ಪ್ರದೇಶದಲ್ಲಿರುವ ಲಖನೌ ವಿಶ್ವವಿದ್ಯಾಲಯದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ದಿವ್ಯ ಕಲಾಮೇಳವನ್ನು ಇಂದಿನಿಂದ ಇದೇ ೨೩ರ ವರೆಗೆ ಆಯೋಜಿಸಿದೆ.  ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಬನ್ವಾರಿ ಲಾಲ್ ವರ್ಮಾ ಈ ಮೇಳವನ್ನು ನಾಳೆ ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>